## ಕರ್ನಾಟಕ ವಿಧಾನಪರಿಷತ್ತು

**ಚುಕ್ಕೆ** ಗುರುತಿಲ್ಲದ ಪ್ರಶ್ನೆ ಸಂಖ್ಯೆ : 561

ಸದಸ್ಯರ ಹೆಸರು : **ಶ್ರೀ ಆರ್.ಧರ್ಮಸೇನ** (ಸ್ಥಳೀಯ ಸಂಸ್ಥೆಗಳ ಕ್ಷೇತ್ರ)

**ಉತ್ತರಿ**ಸುವ ದಿನಾಂಕ : 24.09.2020

**ಉತ್ತರಿ**ಸುವ ಸಚಿವರು : ಮಾನ್ಯ ಮುಖ್ಯಮಂತ್ರಿಯವರು

| ಕ್ರ.ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯಲ್ಲಿರುವ ಸಾರ್ವಜನಿಕ ಸಂಪರ್ಕ ಇಲಾಖೆಯ ಕೆಲಸ ಕಾರ್ಯಗಳಾವುವು: | ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯಲ್ಲಿರುವ ಸಾರ್ವಜನಿಕ ಸಂಪರ್ಕ ಕೆಲಸ ಕಾರ್ಯಗಳು ಈ ಕೆಳಕಂಡಂತಿದೆ.<br><br>ಸರ್ಕಾರದ ಜನಪರ ಯೋಜನೆಗಳನ್ನು ಯಶಸ್ವಿಗೊಳಿಸಲು ಮುದ್ರಣ ಮಾಧ್ಯಮ, ವಿದ್ಯುನ್ಮಾನ ಮಾಧ್ಯಮ ಮತ್ತು ಸಾಮಾಜಿಕ ಜಾಲತಾಣಗಳಲ್ಲಿ ಸುದ್ದಿ ಮತ್ತು ಜಾಹೀರಾತು ಬಿಡುಗಡೆ ಮಾಡುವುದರ ಮೂಲಕ ಸಾರ್ವಜನಿಕರಿಗೆ ತಲುಪಿಸಲಾಗುತ್ತಿದೆ. ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯು ಸರ್ಕಾರ ಮತ್ತು ಮಾಧ್ಯಮಗಳ ನಡುವಿನ ಸಂಪರ್ಕ ಸೇತುವಾಗಿ ಈ ಮಾಧ್ಯಮಗಳಲ್ಲಿ ಜಾಹೀರಾತು ಪ್ರಕಟಿಸುವ ಮುಖಾಂತರ ಜನಜಾಗೃತಿ ಮೂಡಿಸುವ ಜವಬ್ದಾರಿಯನ್ನು ನಿರ್ವಹಿಸುತ್ತಿದೆ.<br><br>ರಾಜ್ಯದ ಬಸ್ ನಿಲ್ದಾಣ, ರೈಲ್ವೆ ನಿಲ್ದಾಣ, ರೈಲ್ವೆ ಬೋಗಿಗಳಲ್ಲಿ ಅಳವಡಿಸಿರುವ ದೃಶ್ಯ ಮತ್ತು ಶ್ರವ್ಯ ಮಾಧ್ಯಮಗಳ ಮೂಲಕ ಹಾಗೂ ರಾಜ್ಯದ ಚಲನಚಿತ್ರ ಮಂದಿರಗಳಲ್ಲಿ ಸರ್ಕಾರದ ಕಾರ್ಯಕ್ರಮಗಳ ಬಗ್ಗೆ ಪ್ರಸಾರ ಮಾಡಲಾಗುತ್ತಿದೆ.<br><br>ಸರ್ಕಾರವು ಹಮ್ಮಿಕೊಳ್ಳುವ ಹಲವಾರು ಮಹತ್ವಾಕಾಂಕ್ಷಿ ಯೋಜನೆಗಳ ಕುರಿತು ಪ್ರಚಾರ ಫಲಕಗಳ ಮೂಲಕ ಪ್ರಚಾರ ಮಾಡಲಾಗುತ್ತಿದೆ.<br><br>ರಾಜ್ಯದ ಪ್ರಮುಖ ಸ್ಥಳಗಳಲ್ಲಿ ಸಂಚರಿಸುವ ರೈಲುಗಳ ಮೂಲಕ ಬಿ.ಬಿ.ಎಂ.ಪಿ. ವ್ಯಾಪ್ತಿಯ ಬಸ್ ತಂಗುದಾಣಗಳ ಸ್ಥಳಗಳಲ್ಲಿ, ರಾಜ್ಯದಾದ್ಯಂತ ರಾಜ್ಯ ಸಾರಿಗೆ ಸಂಸ್ಥೆಯ ಬಸ್‌ಗಳು ಮತ್ತು ಎಲ್.ಇ.ಡಿ. ಡಿಜಿಟಲ್ ಡಿಸ್ ಪ್ಲೇ ಮೂಲಕ ಸಾರ್ವಜನಿಕರಿಗೆ ಸರ್ಕಾರದ ಯೋಜನೆಗಳ ಅರಿವು ಮೂಡಿಸುವ ಕಾರ್ಯವನ್ನು ಮಾಡಲಾಗುತ್ತಿದೆ.<br><br>ಇಲಾಖೆಯ ಮಾಸಿಕಗಳಾದ ಜನಪದ ಮತ್ತು ಮಾರ್ಚ್ ಆಫ್ ಕರ್ನಾಟಕ ಪತ್ರಿಕೆಗಳಲ್ಲಿ ಸರ್ಕಾರದ ಜನಪರ ಯೋಜನೆಗಳ ಕುರಿತು ವಿಶೇಷ ಲೇಖನಗಳ ಮೂಲಕ ಸಾರ್ವಜನಿಕರಿಗೆ ಮಾಹಿತಿ ಒದಗಿಸಲಾಗುತ್ತಿದೆ.<br><br>ಸರ್ಕಾರದ ಸಾಧನೆಗಳನ್ನು ಸಾರ್ವಜನಿಕರಿಗೆ ಪರಿಚಯಿಸಲು ವಿಶೇಷ ಪ್ರಕಟಣೆಗಳನ್ನು ಹೊರತರಲಾಗುತ್ತಿದೆ.<br><br>ಇಲಾಖೆಯ ಜಿಲ್ಲಾ ಕಛೇರಿಗಳಲ್ಲಿ ಬೀದಿ ನಾಟಕ, ಜಾನಪದ ಸಂಗೀತ ಕಾರ್ಯಕ್ರಮಗಳ ಮೂಲಕ ಗ್ರಾಮೀಣ ಪ್ರದೇಶದಲ್ಲಿ ಸರ್ಕಾರದ ಯೋಜನೆಗಳು ಸಾಧಿಸಿರುವ ಪ್ರಗತಿ ಕುರಿತು ಪ್ರಚಾರ ಕಾರ್ಯ ನಿರ್ವಹಿಸಲಾಗುತ್ತಿತ್ತು. |

| | | |
|---|---|---|
| | | ರಾಜ್ಯದ ವಿವಿಧ ಸ್ಥಳಗಳಲ್ಲಿ ನಡೆಯುವ ಜಾತ್ರ , ಉತ್ಸವಗಳಲ್ಲಿ ಹಾಗೂ ಮೈಸೂರು ದಸರಾ ವಸ್ತು ಪ್ರದರ್ಶನದಲ್ಲಿ ಸರ್ಕಾರದ ಅಭಿವೃದ್ಧಿ ಕಾರ್ಯಕ್ರಮಗಳ ಕುರಿತು ವಸ್ತು ಪ್ರದರ್ಶನ ಮಳಿಗೆಯನ್ನು ತೆರೆದು ಜನರಿಗೆ ಅರಿವು ಮೂಡಿಸುವ ಕಾರ್ಯಕ್ರಮವನ್ನು ಮಾಡಲಾಗುತ್ತಿದೆ. |
| ಆ) | ಸಾರ್ವಜನಿಕರಿಗೆ ಯಾವ ರೀತಿಯ ಪ್ರಯೋಜನಗಳು ಈ ಇಲಾಖೆಯಿಂದ ದೊರೆಯುತ್ತಿವೆ: | ಮೇಲ್ಕಂಡ ಕಾರ್ಯಕ್ರಮಗಳ ಮೂಲಕ ಸರ್ಕಾರದ ಯೋಜನೆ ಮತ್ತು ಅಭಿವೃದ್ಧಿ ಕಾರ್ಯಕ್ರಮಗಳ ಕುರಿತು ಸಾರ್ವಜನಿಕರಿಗೆ ಅರಿವು ಮೂಡಿಸಲಾಗುತ್ತಿದ್ದು, ಇದರಿಂದ ಸಾರ್ವಜನಿಕರು ಸರ್ಕಾರದ ಸೌಲಭ್ಯವನ್ನು ಪಡೆಯುವ ಬಗ್ಗೆ ಮಾಹಿತಿ ಲಭಿಸುತ್ತಿದೆ. |
| ಇ) | ಈ ಇಲಾಖೆಯಲ್ಲಿ ಕಳೆದ ಎರಡು ವರ್ಷಗಳಲ್ಲಿ ಆಗಿರುವ ಕಾರ್ಯಕ್ರಮಗಳು ಯಾವುವು ; (ಮಾಹಿತಿ ನೀಡುವುದು) | ಈ ಇಲಾಖೆಯಲ್ಲಿ ಕಳೆದ ಎರಡು ವರ್ಷಗಳಲ್ಲಿ ಆಗಿರುವ ಕಾರ್ಯಕ್ರಮಗಳು :<br>• ಮಹಾತ್ಮಗಾಂಧೀಯವರ 150 ನೇ ಜನ್ಮದಿನಾಚರಣೆ ಅಂಗವಾಗಿ ಗಾಂಧೀಜಿಯವರ ಬದುಕು, ಚಿಂತನ ಕೊಡುಗೆ ಕುರಿತು ಧ್ವನಿ ಬೆಳಕು ಕಾರ್ಯಕ್ರಮವನ್ನು 30 ಜಿಲ್ಲಾ ಕೇಂದ್ರಗಳಲ್ಲಿ ಯಶಸ್ವಿಯಾಗಿ ಏರ್ಪಡಿಸಲಾಗಿದೆ.<br>• ದಿನಾಂಕ : 02-10-2018 ರಂದು "ಗಾಂಧೀ ಜಯಂತಿ" ಅಂಗವಾಗಿ ಗಾಂಧೀಜಿಯವರ ತತ್ವಗಳನ್ನು ಅಳವಡಿಸಿಕೊಂಡು ಸಾಮಾಜಿಕ ಕಾರ್ಯಗಳಲ್ಲಿ ತೊಡಗಿಸಿಕೊಂಡಿರುವ ವ್ಯಕ್ತಿಗಳಿಗೆ ತಲಾ ರೂ. 5.00 ಲಕ್ಷ ನಗದು ಒಳಗೊಂಡ "ಗಾಂಧೀ ಸೇವಾ ಪ್ರಶಸ್ತಿ ಕರ್ನಾಟಕ ನೀಡಲಾಗಿದೆ.<br>• ಕನ್ನಡ ಚಲನಚಿತ್ರ ರಂಗವನ್ನು ಪ್ರೋತ್ಸಾಹಿಸಿ ಬೆಳೆಸಲು ರಾಜ್ಯದಲ್ಲೇ ನಿರ್ಮಿಸಿದ ಕನ್ನಡ ಮತ್ತು ಪ್ರಾದೇಶಿಕ ಭಾಷಾ ಚಿತ್ರಗಳಿಗೆ ಶೇ 100 ರಷ್ಟು ಮನರಂಜನಾ ತೆರಿಗೆ ವಿನಾಯಿತಿ, ಗುಣಾತ್ಮಕ ಚಲನಚಿತ್ರಗಳಿಗೆ ಸಹಾಯಧನ, ಅತ್ಯುತ್ತಮ ಚಲನಚಿತ್ರಗಳಿಗೆ, ಕಲಾವಿದರಿಗೆ, ತಂತ್ರಜ್ಞರಿಗೆ, ನಿರ್ದೇಶಕರಿಗೆ ಮತ್ತು ನಿರ್ಮಾಪಕರಿಗೆ ಪ್ರಶಸ್ತಿ ಪುರಸ್ಕಾರ ನೀಡುವ ಯೋಜನೆ ಜಾರಿಯಲ್ಲಿದೆ.<br>• ಪರಿಶಿಷ್ಟ ಜಾತಿಯವರಿಗೆ ವಿಶೇಷ ಘಟಕ ಯೋಜನೆಯಡಿ ಮತ್ತು ಗಿರಿಜನ ಉಪಯೋಜನೆಯಡಿ ಸಿನಿಮಾ ಕಲಾವಿದರು ಮತ್ತು ನೌಕರರ ಪರಿಹಾರಕ್ಕೆ ಆರ್ಥಿಕ ನೆರವು ಯೋಜನೆಯಡಿ ಅನುದಾನ ಬಿಡುಗಡೆ ಮಾಡಲಾಗಿದೆ.<br>• ಸರ್ಕಾರದ ಯೋಜನೆ, ಸಾಧನೆ ಮತ್ತು ಅಭಿವೃದ್ಧಿ ಕುರಿತು ಕಿರುಚಿತ್ರ, ಸಾಕ್ಷ್ಯಚಿತ್ರಗಳನ್ನು ನಿರ್ಮಿಸಲಾಗಿದೆ.<br>• ಅಂತರರಾಷ್ಟ್ರೀಯ ಚಲನಚಿತ್ರೋತ್ಸವವನ್ನು ಏರ್ಪಡಿಸಲಾಗಿದೆ.<br>• ಕರ್ನಾಟಕ ಚಲನಚಿತ್ರೋದ್ಯಮ ಕ್ಷೇತ್ರದ ಸಂಕಷ್ಟದಲ್ಲಿರುವ ಕಾರ್ಮಿಕರಿಗೆ, ತಂತ್ರಜ್ಞರಿಗೆ ಹಾಗೂ ಕಲಾವಿದರಿಗೆ ಆರ್ಥಿಕ ನೆರವು ನೀಡಲು ದತ್ತಿ ನಿಧಿಯನ್ನು ಸ್ಥಾಪಿಸಿ ಫಲಾನುಭವಿಗಳಿಗೆ ವೈದ್ಯಕೀಯ ವೆಚ್ಚ ಭರಿಸಲಾಗುತ್ತಿದೆ. |

| | | |
|---|---|---|
| | | • ಇಲಾಖೆಯ ಮಾಧ್ಯಮಪಟ್ಟಿಯಲ್ಲಿರುವ ಪರಿಶಿಷ್ಟಜಾತಿ ಮತ್ತು ಪರಿಶಿಷ್ಟ ಪಂಗಡದ ಮಾಲೀಕತ್ವ ಮತ್ತು ಸಂಪಾದಕತ್ವದಲ್ಲಿ ಪ್ರಕಟವಾಗುವ ಪತ್ರಿಕೆಗಳಿಗೆ ಪ್ರೋತ್ಸಾಹ ರೂಪದಲ್ಲಿ ಒಂದು ಪೂರ್ಣ ಪುಟ ಜಾಹೀರಾತು ಬಿಡುಗಡೆ ಮಾಡಲಾಗಿದೆ.<br>• ಪರಿಶಿಷ್ಟ ಜಾತಿ ಮತ್ತು ಪಂಗಡಕ್ಕೆ ಸೇರಿದ ಯುವಕ ಯುವತಿಯರಿಗೆ ಚಲನಚಿತ್ರ ನಿರ್ದೇಶನ. ಛಾಯಾಗ್ರಹಣ. ವೀಡಿಯೋ ಸಂಕಲನ. ಸ್ಕ್ರಿಪ್ಟ್ ತಯಾರಿಕೆ ಕುರಿತು ತರಬೇತಿ ನೀಡಲಾಗಿದೆ.<br><br>• ರಾಜ್ಯ ಸರ್ಕಾರ /ಅರೆ ಸರ್ಕಾರ/ಮಂಡಳಿ ಹಾಗೂ ಇತರ ಇಲಾಖೆಗಳಿಗೆ ಸಂಬಂಧಿಸಿದಂತೆ ಸರ್ಕಾರದ ಪ್ರಮುಖ ಸುದ್ದಿ. ಕಾರ್ಯಚಟುವಟಿಕೆ ಮತ್ತು ಮಾಹಿತಿಯನ್ನು ಪತ್ರಿಕಾ ಪ್ರಕಟಣೆಗಳ ಮೂಲಕ ಮಾಧ್ಯಮಗಳಿಗೆ ಬಿಡುಗಡೆ ಮಾಡುತ್ತಿದೆ.<br>• ರಾಜ್ಯದ ಅಭಿವೃದ್ಧಿ ಕಾರ್ಯಕ್ರಮ. ಗಣ್ಯಾತಿ ಗಣ್ಯರ ಭೇಟಿ ಸಂದರ್ಭದಲ್ಲಿ ಸರ್ಕಾರಿ ಸಭೆ. ಸಮಾರಂಭಗಳಿಗೆ ಮುದ್ರಣ ಹಾಗೂ ವಿದ್ಯುನ್ಮಾನ ಮಾಧ್ಯಮದ ಪತ್ರಕರ್ತರು. ವರದಿಗಾರರು. ಛಾಯಾಗ್ರಾಹಕರು ಭಾಗವಹಿಸಲು ಅನುಕೂಲವಾಗುವಂತೆ ಮಾನ್ಯತಾ ಕಾರ್ಡ್‌ಗಳನ್ನು ನೀಡಲಾಗಿದೆ ಹಾಗೂ ಮಾನ್ಯತಾ ಕಾರ್ಡ್ ಹೊಂದಿದ ಪತ್ರಕರ್ತರಿಗೆ ರಾಜ್ಯಾದಾದ್ಯಂತ ರಾಜ್ಯ ರಸ್ತೆ ಸಾರಿಗೆ ಸಂಸ್ಥೆ ಬಸ್‌ಗಳಲ್ಲಿ ಉಚಿತವಾಗಿ ಪ್ರಯಾಣಿಸಲು ಸ್ಮಾರ್ಟ್ ಕಾರ್ಡ್ ಒದಗಿಸಲಾಗಿದೆ ಮತ್ತು ರೈಲ್ವೆ ಪ್ರಯಾಣ ದರದಲ್ಲಿ ಶೇ 50 ರಷ್ಟು ರೈಲ್ವೆ ರಿಯಾಯಿತಿ ಪಾಸ್ ಪಡೆಯಲು ಇಲಾಖೆಯಿಂದ ಶಿಫಾರಸ್ಸು ಮಾಡಲಾಗಿದೆ.<br>• ಭದ್ರತಾ ದೃಷ್ಟಿಯಿಂದ ರಾಜ್ಯ ಸರ್ಕಾರವು ವಿಧಾನಸೌಧ. ವಿಕಾಸಸೌಧಗಳನ್ನು ನಿರ್ಬಂಧಿತ ಪ್ರದೇಶಗಳೆಂದು ಘೋಷಿಸಿರುವುದರಿಂದ ಮಾಧ್ಯಮ ಪ್ರತಿನಿಧಿಗಳಲ್ಲಿ ಯಾರಿಗೆ ಪ್ರವೇಶ ಪತ್ರ ನೀಡಬೇಕೆಂದು ನಿರ್ಣಯ ಮಾಡಲು ಸಮಿತಿ ರಚಿಸಿದ್ದು. ಅದರನ್ವಯ ಪತ್ರಕರ್ತರಿಗೆ ವಿಧಾನಸೌಧ ಪ್ರವೇಶ ಪತ್ರವನ್ನು ನೀಡಲಾಗಿದೆ.<br>• ವಿಶೇಷ ಘಟಕ ಯೋಜನೆಯಡಿ ಅರ್ಹ ಪರಿಶಿಷ್ಟ ಜಾತಿಯ ಪತ್ರಕರ್ತರಿಗೆ ಹಾಗೂ ಪರಿಶಿಷ್ಟ ಪಂಗಡದ ಪತ್ರಕರ್ತರಿಗೆ ಮೀಡಿಯಾ ಕಿಟ್ ವಿತರಿಸಲಾಗಿದೆ.<br>• ಆರೋಗ್ಯ ಭಾಗ್ಯ ಯೋಜನೆಯಡಿ ಪತ್ರಕರ್ತರಿಗೆ ಆಯುಷ್ಮಾನ್ ಭಾರತ ಆರೋಗ್ಯ ಕರ್ನಾಟಕ ಯೋಜನೆಯನ್ನು ಜಾರಿಗೆ ತರಲಾಗಿದೆ. ಪತ್ರಕರ್ತರಿಗೆ ಆರೋಗ್ಯ ಕಾರ್ಡ್‌ಗಳನ್ನು ವಿತರಿಸಲಾಗುತ್ತಿದೆ. |

| | | |
|---|---|---|
| | | • ಸಂಕಷ್ಟದಲ್ಲಿರುವ ಪತ್ರಕರ್ತರಿಗೆ ಮಾಸಿಕ 10,000/- ರೂ. ಗಳ ಮಾಸಾಶನವನ್ನು ಹಾಗೂ ಮೃತ ಪತ್ರಕರ್ತರ ಕುಟುಂಬದವರಿಗೆ 3,000/- ರೂ. ಕುಟುಂಬ ಮಾಸಾಶನವನ್ನು ನೀಡಲಾಗುತ್ತಿದೆ.<br><br>• ಪತ್ರಿಕೋದ್ಯಮದಲ್ಲಿ ಅತ್ಯುತ್ತಮ ಕೊಡುಗೆ ನೀಡಿರುವ ಮತ್ತು ಗಮನಾರ್ಹ ಸಾಧನೆ ಮಾಡಿದ ಪತ್ರಕರ್ತರನ್ನು ಗುರುತಿಸಿ ಗೌರವ ನೀಡುವ ಸಲುವಾಗಿ "ಟಿಯೆಸ್ಸಾರ್ ಸ್ಮಾರಕ ಪತ್ರಿಕೋದ್ಯಮ ಪ್ರಶಸ್ತಿ" ಹಾಗೂ "ಮೊಹರೆ ಹಣಮಂತರಾಯ ಪತ್ರಿಕೋದ್ಯಮ ಪ್ರಶಸ್ತಿ" ನೀಡಲಾಗಿದೆ.<br><br>• ಕರ್ನಾಟಕ ಮಾಧ್ಯಮ ಅಕಾಡೆಮಿ ಮೂಲಕ ವಿಶೇಷ ಘಟಕ ಯೋಜನೆಯಡಿ ಪರಿಶಿಷ್ಟ ಜಾತಿ ಹಾಗೂ ಪರಿಶಿಷ್ಟ ಪಂಗಡದ ವಿದ್ಯಾರ್ಥಿಗಳಿಗೆ ಇಂಟರ್ನ್‌ಶಿಪ್ ತರಬೇತಿಯನ್ನು ನೀಡಲಾಗಿದೆ.<br><br>• **ಅಪ್ರೆಂಟಿಸ್ ತರಬೇತಿ ಕಾರ್ಯಕ್ರಮ**:- ವಿಶೇಷ ಘಟಕ ಹಾಗೂ ಗಿರಿಜನ ಉಪಯೋಜನೆಯಡಿ ಅಪ್ರೆಂಟಿಸ್ ತರಬೇತಿಗೆ ಪರಿಶಿಷ್ಟ ಜಾತಿಗೆ ಸೇರಿದ ಅರ್ಹ ಅಭ್ಯರ್ಥಿಗಳಿಗೆ ತರಬೇತಿ ನೀಡಲಾಗಿದೆ.<br>• ಮಹಿಳಾ ಉದ್ದೇಶಿತ ಆಯವ್ಯಯದಡಿ ಮಹಿಳಾ ಪತ್ರಿಕೋದ್ಯಮ ಅಭ್ಯರ್ಥಿಗಳನ್ನು ಪ್ರತಿ ಜಿಲ್ಲೆಗೆ ತಲಾ ಇಬ್ಬರಂತೆ ಅಪ್ರೆಂಟಿಸ್ ತರಬೇತಿ ನೀಡಲಾಗಿದೆ.<br><br>• ಇಲಾಖೆಯ ಜಿಲ್ಲಾ ಕಛೇರಿಗಳಲ್ಲಿ ಬೀದಿ ನಾಟಕ. ಜಾನಪದ ಸಂಗೀತ ಕಾರ್ಯಕ್ರಮಗಳ ಮೂಲಕ ಗ್ರಾಮೀಣ ಪ್ರದೇಶದಲ್ಲಿ ಸರ್ಕಾರದ ಯೋಜನೆಗಳು ಸಾಧಿಸಿರುವ ಪ್ರಗತಿ ಕುರಿತು ಪ್ರಚಾರ ಕಾರ್ಯ ಕೈಗೊಳ್ಳಲಾಗುತ್ತಿದೆ.<br>• ರಾಜ್ಯದ ವಿವಿಧ ಸ್ಥಳಗಳಲ್ಲಿ ನಡೆಯುವ ಜಾತ್ರೆ . ಉತ್ಸವಗಳಲ್ಲಿ ಹಾಗೂ ಮೈಸೂರು ದಸರಾ ವಸ್ತು ಪ್ರದರ್ಶನದಲ್ಲಿ ಸರ್ಕಾರದ ಅಭಿವೃದ್ಧಿ ಕಾರ್ಯಕ್ರಮಗಳ ಕುರಿತು ವಸ್ತು ಪ್ರದರ್ಶನ ಮಳಿಗೆಯನ್ನು ತೆರೆದು ಜನರಿಗೆ ಅರಿವು ಮೂಡಿಸಲಾಗುತ್ತಿದೆ.<br><br>• ಜಿಲ್ಲಾ ಉತ್ಸವ ಹಾಗೂ ವಿಶೇಷ ಸಂದರ್ಭಗಳಲ್ಲಿ ವಸ್ತುಪ್ರದರ್ಶನ :- ರಾಜ್ಯ ಸರ್ಕಾರವು 100 ದಿನಗಳಲ್ಲಿ ಕೈಗೊಂಡ ಅಭಿವೃದ್ಧಿ ಕಾರ್ಯಕ್ರಮಗಳು ಹಾಗೂ ನೆರ ಪ್ರವಾಹದ ಸಂದರ್ಭದಲ್ಲಿ ಕೈಗೊಂಡ ಪರಿಹಾರ ಕಾರ್ಯಗಳ ಛಾಯಾಚಿತ್ರ ಪ್ರದರ್ಶನವನ್ನು ರಾಜ್ಯದ ಎಲ್ಲಾ ಜಿಲ್ಲಾ ಕೇಂದ್ರಗಳಲ್ಲಿ ಏರ್ಪಡಿಸಲಾಗಿದೆ.<br>**ಹೊರರಾಜ್ಯಗಳಲ್ಲಿ ಕನ್ನಡ ರಾಜ್ಯೋತ್ಸವ** :- ಕನ್ನಡಿಗರು ಹೆಚ್ಚಿನ ಸಂಖ್ಯೆಯಲ್ಲಿ ವಾಸಿಸುವ ದೆಹಲಿ ಹಾಗೂ ಸುತ್ತಮುತ್ತಲಿನ ನಾಲ್ಕು ಸ್ಥಳಗಳಲ್ಲಿ ಕನ್ನಡ ರಾಜ್ಯೋತ್ಸವ ಕಾರ್ಯಕ್ರಮವನ್ನು ಏರ್ಪಡಿಸಲಾಗಿದೆ. |

| | | |
|---|---|---|
| | | • **ಗಡಿನಾಡ ಉತ್ಸವ** :- ನೆರೆ ರಾಜ್ಯಗಳ ನಗರಗಳಾದ ಹೈದರಾಬಾದ್, ಚೆನ್ನೈ, ಪುಣೆ ಹಾಗೂ ಕೊಚ್ಚಿನ್ ಗಳಲ್ಲಿ ಗಡಿನಾಡ ಉತ್ಸವ ಕಾರ್ಯಕ್ರಮವನ್ನು ಏರ್ಪಡಿಸಲಾಗಿದೆ.<br>• **ದೆಹಲಿ ಗಣರಾಜ್ಯೋತ್ಸವ ಸ್ತಬ್ಧಚಿತ್ರ** :- ನವದೆಹಲಿಯಲ್ಲಿ ಪ್ರತಿ ವರ್ಷ ನಡೆಯುವ ಗಣರಾಜ್ಯೋತ್ಸವ ಪೆರೇಡ್‌ನಲ್ಲಿ ವಿಷಯಾಧಾರಿತ ಸ್ತಬ್ಧಚಿತ್ರದೊಂದಿಗೆ ಭಾಗವಹಿಸಲಾಗಿದೆ.<br>• ಮೈಸೂರು ದಸರಾದಲ್ಲಿ ಕಾರ್ಯಕ್ರಮದಲ್ಲಿ ಸ್ತಬ್ಧಚಿತ್ರದೊಂದಿಗೆ ಭಾಗವಹಿಸಲಾಗಿದೆ.<br>• ಮಹಾತ್ಮಗಾಂಧೀಜಿಯವರ 150 ನೇ ಜನ್ಮದಿನಾಚರಣೆ ಅಂಗವಾಗಿ ಗಾಂಧೀಜಿಯವರ ತತ್ವ ಸಿದ್ಧಾಂತಗಳನ್ನು ರಾಜ್ಯದ ಜನತೆಗೆ ತಲುಪಿಸುವ ಉದ್ದೇಶದಿಂದ ಎರಡು ಸ್ತಬ್ಧಚಿತ್ರಗಳನ್ನು ನಿರ್ಮಿಸಿ ರಾಜ್ಯಾದ್ಯಂತ ಪ್ರದರ್ಶನ ಮತ್ತು ವಸ್ತು ಪ್ರದರ್ಶನ ಏರ್ಪಡಿಸಲಾಗಿದೆ.<br>• ಬೀದರ್ ಮತ್ತು ರಾಯಚೂರು ಜಿಲ್ಲೆಗಳಲ್ಲಿ ಮುಖ್ಯಮಂತ್ರಿಯವರೊಂದಿಗೆ ರಾಜ್ಯದ ವಿವಿಧ ಕ್ಷೇತ್ರಗಳ ವಿಷಯ ತಜ್ಞರು ಹಾಗೂ ಗಣ್ಯರೊಂದಿಗೆ ಮತ್ತು ಪ್ರಗತಿಪರ ರೈತರೊಂದಿಗೆ ನೇರ ಸಂವಾದ ಕಾರ್ಯಕ್ರಮವನ್ನು ಏರ್ಪಡಿಸಲಾಗಿತ್ತು.<br>• ಸರ್ಕಾರದ ಜನಪರ ಯೋಜನೆಗಳನ್ನು ಸಾರ್ವಜನಿಕರಿಗೆ ತಲುಪಿಸಲು ಇಲಾಖೆಯ ಮಾಧ್ಯಮ ಪಟ್ಟಿಯಲ್ಲಿರುವ ದಿನಪತ್ರಿಕೆಗಳು, ಪ್ರಾದೇಶಿಕ ಪತ್ರಿಕೆಗಳು, ಜಿಲ್ಲಾಮಟ್ಟದ ಪತ್ರಿಕೆಗಳು ಮತ್ತು ನಿಯತಕಾಲಿಕೆಗಳ ಮೂಲಕ ಜಾಹೀರಾತು ನೀಡಲಾಗುತ್ತಿದೆ.<br>• ಸರ್ಕಾರದ ವಿವಿಧ ಇಲಾಖೆಗಳು ಹಮ್ಮಿಕೊಳ್ಳುವ ಅಭಿವೃದ್ಧಿ ಕಾಮಗಾರಿಗಳಿಗೆ ಸಂಬಂಧಿಸಿದಂತೆ ಹೊರಡಿಸುವ ಟೆಂಡರ್ ಪ್ರಕಟಣೆಗಳನ್ನು ಟೆಂಡರ್ ಮತ್ತು ವರ್ಗೀಕೃತ ಜಾಹೀರಾತುಗಳಡಿ ಬಿಡುಗಡೆ ಮಾಡಲಾಗಿದೆ.<br>• ವಿದ್ಯುನ್ಮಾನ ಮಾಧ್ಯಮಪಟ್ಟಿಯಲ್ಲಿರುವ ಟಿ.ವಿ. ವಾಹಿನಿ, ರೇಡಿಯೋ ವಾಹಿನಿ, ರಾಜ್ಯದ ಬಸ್ ನಿಲ್ದಾಣ, ರೈಲ್ವೆ ನಿಲ್ದಾಣ, ರೈಲ್ವೆ ಬೋಗಿಗಳಲ್ಲಿ ಅಳವಡಿಸಿರುವ ದೃಶ್ಯ ಮತ್ತು ಶ್ರವ್ಯ ಮಾಧ್ಯಮಗಳ ಮೂಲಕ ಜಾಹೀರಾತು ಪ್ರಸಾರ ಮಾಡಲಾಗುತ್ತಿದೆ.<br>• ಇಲಾಖೆಯ ಮಾಸಿಕಗಳಾದ ಜನಪದ ಮತ್ತು ಮಾರ್ಚ್ ಆಫ್ ಕರ್ನಾಟಕ ಮಾಸಿಕಗಳಲ್ಲಿ ಸರ್ಕಾರದ ಜನಪರ ಯೋಜನೆಗಳ ಕುರಿತು ವಿಶೇಷ ಲೇಖನಗಳ ಮೂಲಕ ಸಾರ್ವಜನಿಕರಿಗೆ ಮಾಹಿತಿ ಒದಗಿಸಲಾಗುತ್ತಿದೆ. |

| | | |
|---|---|---|
| | | • ಸರ್ಕಾರದ ಸಾಧನೆಗಳನ್ನು ಸಾರ್ವಜನಿಕರಿಗೆ ಪರಿಚಯಿಸಲು ವಿಶೇಷ ಪ್ರಕಟಣೆಗಳನ್ನು ಹೊರತರಲಾಗುತ್ತಿದೆ.<br><br>• ಸರ್ಕಾರದ ಒಂದು ವರ್ಷದ ಸಾಧನೆ ಕುರಿತು ಮೈತ್ರಿ ಕಿರುಪುಸ್ತಕ, ಜಯಚಾಮರಾಜೇಂದ್ರ ಒಡೆಯರ್‌ರವರ ಜನ್ಮ ಶತಮಾನೋತ್ಸವ ಅಂಗವಾಗಿ ಜಯಚಾಮರಾಜೇಂದ್ರ ಒಡೆಯರ್ ಕಿರು ಪುಸ್ತಕವನ್ನು ಆಂಗ್ಲ ಹಾಗೂ ಕನ್ನಡ ಭಾಷೆಯಲ್ಲಿ, ಗಾಂಧೀ ಜಯಂತಿ ಅಂಗವಾಗಿ ಬಾಪು ಗಾಂಧಿ ಕಿರು ಪುಸ್ತಕವನ್ನು ಹಾಗೂ ಸರ್ಕಾರದ ನೂರು ದಿನಗಳ ಸಾಧನೆ ಕುರಿತು 'ದಿನ ನೂರು ಸಾಧನೆ ನೂರಾರು' ಕಿರು ಪುಸ್ತಕವನ್ನು ಹೊರ ತಂದು ಸಾರ್ವಜನಿಕರಿಗೆ ವಿತರಿಸಲಾಗಿದೆ. |

ಸಂಖ್ಯೆ: KCI-PIP/192/2020

ಬಿ.ಎಸ್. ಯಡಿಯೂರಪ್ಪ

(ಬಿ.ಎಸ್.ಯಡಿಯೂರಪ್ಪ)

ಮುಖ್ಯಮಂತ್ರಿ